PW - 1

ದಿನಾಂಕಃ 12.11.2025 ರಂದು ಸಾಕ್ಷಿಗೆ ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

ಪಾಟೀ ಸವಾಲುಃ 1 ನೇ ಎದುರುದಾರರ ಪರ ವಕೀಲರಿಂದ -

ತಿಪ್ಪೇಶ್ ನನ್ನ ಮಾವ. ಅವರು ಗಾಡಿ ಚಲಾಯಿಸುತ್ತಿದ್ದಾಗ ನಾನು ಹಿಂಬದಿಯಲ್ಲಿ ಕುಳಿತಿದ್ದೆ. ದಾವಣಗೆರೆಯಿಂದ ಬೂದಿಹಾಳು ಗೆ ಹೋಗುತ್ತಿದ್ದೆ. ಮಾರ್ಗ ಮಧ್ಯದಲ್ಲಿ ಟ್ರಾಫಿಕ್ ಸಿಗ್ನಲ್ಗಳು ಇದ್ದವು ಎಂದರೆ ಸರಿಯಲ್ಲ. ಪೆಟ್ರೋಲ್ ಬಂಕ್ ಮತು ಆರ್ ಟಿ ಒ ಕಚೇರಿ ಇರುವುದರಿಂದ ವಾಹನಗಳು ನಿಧಾನವಾಗಿ ಚಲಿಸುತ್ತಿದ್ದವು ಎಂದರೆ ಸರಿಯಲ್ಲ. ಬೂದಿಹಾಳು ರಸ್ತೆಯಲ್ಲಿ ರೋಡ್ ಹಂಪ್ಸ ಇದೆ ಎಂದರೆ ಸರಿಯಲ್ಲ. ಸಿಗ್ನಲ್ ಮತ್ತು ರೋಡ್ ಹಂಪ್ಸ ಇರುವುದರಿಂದ ಎಲ್ಲಾ ವಾಹನಗಳು ನಿಧಾನವಾಗಿ ಚಲಿಸುತ್ತಿದ್ದವು ಎಂದರೆ ಸರಿಯಲ್ಲ. ನನ್ನ ಮಾವನ ತಪ್ಪಿನಿಂದ ಅಪಘಾತವಾಗಿದೆ ಎಂದರೆ ಸರಿಯಲ್ಲ. ಎದುರುದಾರರ ವಾಹನಕ್ಕೆ ವಿಮ ಇರುವುದರಿಂದ ನಾವು ಪರಿಹಾರ ನೀಡಲು ಬಾಧ್ಯಸ್ಥರಲ್ಲ ಎಂದರೆ ಸರಿಯಲ್ಲ. ನನ್ನ ಮಾವನಿಗೆ ಹೈನುಗಾರಿಕೆಯಿಂದ ತಿಂಗಳಿಗೆ 30 ಸಾವಿರ ಆದಾಯವಿದೆ ಎಂದು ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ಪರಿಹಾರ ಪಡೆಯುವ ಸಲುವಾಗಿ ಸುಳ್ಳು ಪ್ರಕರಣ ದಾಖಲಿಸಿದ್ದೇವೆ ಎಂದರೆ ಸರಿಯಲ್ಲ.

ಮರು ವಿಚಾರಣೆಃ ಇಲ್ಲ

(ಬಹಿರಂಗ ನ್ಯಾಯಾಲಯದಲ್ಲಿ ನನ್ನ ಹೇಳಿಕೆ ಮೇರೆಗೆ ಬೆರಳಚ್ಚು ಮಾಡಿಸಲಾಯಿತು).

ಓ.ಹೇ.ಕೇ.ಸ.ಸ.ಇದೆ.

ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಸಿಜೆಎಂ
ನ್ಯಾಯಾಲಯ, ದಾವಣಗೆರೆ